(ದರ್ಜೆ ಮತ್ತು ನೇಮಕಾತಿ) ನಿಯಮಗಳು 1997ನ್ನು ರಚಿಸಿರುವ ಸಂಬಂಧದಲ್ಲಿ ದಿನಾಂಕ 19-3-97 ರಂದು ಹೊರಡಿಸಲಾದ ಡಿಪಿಎಆರ್ 45 ಎಸ್ಆರ್ಇ 96ನೇ ಕ್ರಮಾಂಕದ ಅಧಿಸೂಚನೆಯನ್ನು ಮಂಡಿಸುತ್ತೇನೆ.

ಶ್ರೀ ಎ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು)

II ಶ್ರೀ ಆರ್. ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕಾ ಹಾಗೂ ಮೂಲಭೂತ ಸೌಕರ್ಯಾಭಿವೃದ್ಧಿ ಮಂತ್ರಿ) ಅವರ ಪರವಾಗಿ

1956ರ ಕಂಪೆನಿಗಳ ಕಾಯ್ದೆಯ 619ಎ ಪ್ರಕರಣದ ಮೇರೆಗೆ.

1. 1995-96ನೇ ಸಾಲಿನ ಚಾಮುಂಡಿ ಮೆಷಿನ್ ಟೂಲ್ಸ್ ನಿಯಮಿತದ 20ನೇ ವಾರ್ಷಿಕ ವರದಿ.

2. 1995-96ನೇ ಸಾಲಿನ ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಮತ್ತು ಅಭಿವೃದ್ಧಿ ನಿಗಮ ನಿಯಮಿತದ 32ನೇ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಎ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮಂತ್ರಿ)

III ಶ್ರೀ ಎಂ. ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ವಾರ್ತಾ ಹಾಗೂ ಪ್ರಚಾರ ಮಂತ್ರಿ) ಅವರ ಪರವಾಗಿ

1986ರ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ ಅಧಿನಿಯಮದ 26(2)ನೇ ಪ್ರಕರಣದ ಮೇರೆಗೆ

1995-96ನೇ ಸಾಲಿನ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿಯ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಉಪಾಧ್ಯಕ್ಷರು : ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

11. ವರದಿಗಳನ್ನೊಪ್ಪಿಸುವುದು

ಶ್ರೀ ಎನ್. ಯೋಗೇಶ್ ಭಟ್ : ಮಾನ್ಯ ಉಪಾಧ್ಯಕ್ಷರೆ, ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿಯ ಮೊದಲನೆ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಉಪಾಧ್ಯಕ್ಷರು : ವರದಿಯನ್ನು ಮಂಡಿಸಲಾಯಿತು.

12. ಅಧ್ಯಕ್ಷರ ಅಪ್ಪಣೆ ಮೇರೆಗೆ ಚರ್ಚಿಸಲಾದ ವಿಷಯಗಳು